Attestation copy

ಬೆಂಗಳೂರು ನಗರ ವಿಶ್ವವಿದ್ಯಾನಿಲಯ
BENGALURU CITY UNIVERSITY
ಸೆಂಟ್ರಲ್ ಕಾಲೇಜು ಆವರಣ, ಡಾ॥ ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು– 560 001.
Ph.No.080-22961016 / 22131385 E-Mail ID: registrarbcu@gmail.com

ಸಂಖ್ಯೆ: ಬೆ.ನ.ವಿ./ಶ.ಸ./ಸಂಯೋಜನಾ/ /2022–23

ದಿನಾಂಕ: 18.10.2022

## ಅಧಿಸೂಚನೆ

ವಿಷಯ: 2022–23ನೇ ಶೈಕ್ಷಣಿಕ ಸಾಲಿಗೆ **MLA Academy of Higher Learning** ಇವರಿಗೆ ತಾತ್ಕಾಲಿಕ ಮತ್ತು ಶಾಶ್ವತ ಸಂಯೋಜನೆ ನವೀಕರಿಸುವ, ಪ್ರಮಾಣವನ್ನು ಹೆಚ್ಚಿಸುವ ಹಾಗೂ ಹೊಸ ಕೋರ್ಸಿಗೆ ಅನುಮತಿ ನೀಡುವ ಬಗೆಗೆ.

ಉಲ್ಲೇಖ : 1. ಸರ್ಕಾರಿ ಆದೇಶ ಸಂಖ್ಯೆ: ಇಡಿ34ಇಜಿಒವಿ2020(ಭಾಗ–2) ದಿನಾಂಕ:26.04.2022
2. ಸರ್ಕಾರಿ ಆದೇಶ ಸಂಖ್ಯೆ: ಇಡಿ 373 ಯುಬಿವಿ 2022 ದಿನಾಂಕ: 05.08.2022
3. ಸಿಂಡಿಕೇಟ್/ವಿದ್ಯಾವಿಷಯಕ ಪರಿಷತ್ ಸಭೆಯ ಅನುಮೋದನೆ ದಿನಾಂಕ: 28.06.2022

*****

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ನಗರ ವಿಶ್ವವಿದ್ಯಾನಿಲಯವು 2022–23ನೇ ಸಾಲಿಗೆ ಬೆಂಗಳೂರಿನ **MLA Academy of Higher Learning, 14th Cross, Malleshwaram, Bengaluru – 03.** ನಡೆಸುತ್ತಿರುವ ಕೆಳಕಂಡ ಕೋರ್ಸಿಗೆ/ಕೋರ್ಸುಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ತಾತ್ಕಾಲಿಕ ಮತ್ತು ಶಾಶ್ವತ ಸಂಯೋಜನೆಯನ್ನು ನವೀಕರಿಸಿ, ವಿದ್ಯಾರ್ಥಿ ಪ್ರಮಾಣವನ್ನು ಹೆಚ್ಚಿಸಿ, ಮತ್ತು ಹೊಸ ಕೋರ್ಸನ್ನು ನೀಡಿ ಮುಂದುವರಿಸಿದೆ.

| ಕೋರ್ಸು | ವಿಷಯ, ಶಿಸ್ತಿನ/ಮೂಲ ವಿಷಯಗಳು ( Subject, Discipline / Core subjects) | ವಿದ್ಯಾರ್ಥಿ ಪ್ರಮಾಣ |
|---|---|---|
| B.Com | General** | 180+200=380 (ಮೂನ್ನೂರ ಎಂಭತ್ತು) |
| B.Com | Business Data Analytics | 30+30= 60 (ಅರವತ್ತು) |
| BBA | General** | 60 (ಅರವತ್ತು) |
| BCA | General | 60 (ಅರವತ್ತು) |
| M.Com | General | 40 (ನಲವತ್ತು) |
| **Additional Course** | | |
| B. Com | Accounting and Finance | 100 (ನೂರು) |

*** ಆಸ್ಟ್ರಿಕ್ ಗುರುತುಳ್ಳ ಕೋರ್ಸಿಗೆ/ಕೋರ್ಸುಗಳಿಗೆ 2020–21 ನೇ ಶೈಕ್ಷಣಿಕ ಸಾಲಿನಿಂದ 2024–25ನೇ (ಐದು ವರ್ಷಗಳ) ಅವಧಿಗೆ ಶಾಶ್ವತ ಸಂಯೋಜನೆಯನ್ನು ನೀಡಲಾಗಿದೆ.*

*ವಿ.ಸೂ: 2022–23ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಲಗತ್ತಿಸಿದೆ. ಕಾಲೇಜುಗಳಿಗೆ ಸಿಂಡಿಕೇಟು ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದೊಂದಿಗೆ ಮಾತ್ರ ಸಂಯೋಜನೆಯನ್ನು ನವೀಕರಿಸಲಾಗಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ*



PRINCIPAL
MALLESWARAM LADIES ASSOCIATION
ACADEMY OF HIGHER LEARNING
14th Cross, Malleswaram,
Bangalore - 560 003

ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನ್ಯತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು. ಇಲ್ಲವಾದಲ್ಲಿ ಮುಂದಿನ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣದ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.

<u>ಷರತ್ತುಗಳು:</u>

ಆರು ತಿಂಗಳುಗಳ ಒಳಗಾಗಿ ಕಟ್ಟಡ ಸುರಕ್ಷತೆ ಸಂರಚನೆ ಸ್ಥಿರತೆ ಪ್ರಮಾಣ ಪತ್ರವನ್ನು ಲೋಕೋಪಯೋಗಿ ಇಲಾಖೆಯಿಂದ ಹಾಗೂ ಅಗ್ನಿ ಸುರಕ್ಷತೆ ಪ್ರಮಾಣ ಪತ್ರವನ್ನು ಲೋಕೋಪಯೋಗಿ ಇಲಾಖೆಯಿಂದ, ಮತ್ತು ತುರ್ತು ಸೇವೆಗಳ ಇಲಾಖೆಯಿಂದ ಪಡೆದು ವಿಶ್ವವಿದ್ಯಾಲಯದಲ್ಲಿ ಸಲ್ಲಿಸತಕ್ಕದ್ದು. ಹಾಗೂ ನ್ಯಾಕ್ ಮಾನ್ಯತೆಯನ್ನು ಕಡ್ಡಾಯವಾಗಿ ಪಡೆಯತಕ್ಕದ್ದು. ತಪ್ಪಿದಲ್ಲಿ ಹೊಸ ಸಂಯೋಜನೆಗೆ ಈ ಪತ್ರದ ಅನ್ವಯ ಮಾಡಲಾದ ಶಿಫಾರಸು ಸ್ವಯಂ ಚಾಲಿತವಾಗಿ ರದ್ದಾಗುತ್ತದೆ.

ಬೋಧಕ ಸಿಬ್ಬಂದಿಗೆ ಯುಜಿಸಿ / ರಾಜ್ಯ ವೇತನ ಶ್ರೇಣಿಯಲ್ಲಿ ವೇತನ ಪಾವತಿಸತಕ್ಕದ್ದು ಮತ್ತು ಕಾಲೇಜ್ ಕೌನ್ಸಿಲ್ ಅರ್ಹ ದೈಹಿಕ ಶಿಕ್ಷಣ ನಿರ್ದೇಶಕರನ್ನು ನೇಮಿಸತಕ್ಕದ್ದು. ಸ್ಥಳೀಯ ವಿಚಾರಣೆ ಸಮಿತಿಯು ಅವಲೋಕಿಸಿರುವಂತೆ ಸಿಬ್ಬಂದಿಗೆ ಸೂಕ್ತ ವೇತನವನ್ನು ಪಾವತಿಸತಕ್ಕದ್ದು ಹಾಗೂ ಪ್ರವೇಶ ದಾಖಲಾತಿಗಳನ್ನು ಉತ್ತಮಗೊಳಿಸತಕ್ಕದ್ದು. ಸಮಿತಿಯು ಸ್ಥಳೀಯ ವಿಚಾರಣೆ ಸಮಿತಿಯ ಹಾಗೂ ಈ ಪತ್ರದಲ್ಲಿನ ಷರತ್ತುಗಳನ್ನು ಕಾಲೇಜು ಪರಿಪಾಲಿಸುವುದನ್ನು ವಿಶ್ವವಿದ್ಯಾಲಯವು ಖಚಿತಪಡಿಸಿಕೊಳ್ಳತಕ್ಕದ್ದು. ತಪ್ಪಿದಲ್ಲಿ 2023-24ನೇ ಸಾಲಿನಿಂದ ಸಂಯೋಜನೆಯನ್ನು ರದ್ದುಪಡಿಸಲು ಬೆಂಗಳೂರು ನಗರ ವಿಶ್ವವಿದ್ಯಾನಿಲಯಕ್ಕೆ ಸೂಚಿಸಲಾಗಿದೆ.

ಮುಂದುವರೆದು ಎಂಎಲ್‌ಎ ಅಕಾಡೆಮಿ ಆಫ್ ಹೈಯರ್ ಲರ್ನಿಂಗ್ ಗೆ 2022-23ನೇ ಶೈಕ್ಷಣಿಕ ಸಾಲಿನಿಂದ ಮೇಲ್ಕಂಡಂತೆ ಹೊಸ ಕೋರ್ಸ್ ಸಂಯೋಜನೆ ನೀಡುವುದು ಸ್ಥಳೀಯ ವಿಚಾರಣೆ ಸಮಿತಿಯ ಷರತ್ತುಗಳು ಸೇರಿದಂತೆ ಈ ಕೆಳಕಂಡ ಎಲ್ಲಾ ಷರತ್ತುಗಳನ್ನು ಪಾಲಿಸುವ ನಿಬಂಧನೆಗೆ ಒಳಪಟ್ಟಿರುತ್ತದೆ.

1. ಸ್ಥಳೀಯ ವಿಚಾರಣಾ ಸಮಿತಿಯು ನಮೂದಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು.
2. *ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎಸ್‌ಇ 2021 ದಿನಾಂಕ: 12-02-2021ರಲ್ಲಿ ಸೂಚಿಸಿರುವಂತೆ ಕಾಲೇಜುಗಳು ಮುಂದಿನ ಎರಡು ವರ್ಷಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಲಾಗಿರುವ ಎಲ್ಲಾ ಎಂಟು Defined Parameters ಗಳನ್ನು ಪೂರೈಸಲು ಕ್ರಮವಹಿಸತಕ್ಕದ್ದು.*
3. ಸರ್ಕಾರವು ನಿರ್ದೇಶಿಸಿರುವಂತೆ ಸಂಯೋಜಿತ ಕೋರ್ಸುಗಳಿಗೆ ಕಡ್ಡಾಯವಾಗಿ ಸರ್ಕಾರದ UUCMS ಪೋರ್ಟಲ್ ಮೂಲಕವೇ ಪ್ರವೇಶಾತಿಯನ್ನು ಮಾಡತಕ್ಕದ್ದು.
4. ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದ್ದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯ ಅಂಗೀಕಾರ ನೀಡುವುದಿಲ್ಲ.
5. ಯಾವುದೇ ಕೋರ್ಸಿಗೆ/ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
6. ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
7. ಕಾಲೇಜಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನ ರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು.
8. ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು.
9. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ ಆದೇಶಗಳು ಹಾಗು ಅನುಶಾಸನ, ಪರಿನಿಯಮಾವಳಿ. ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
10. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
11. Open electiveಗೆ ಸಂಬಂಧಪಟ್ಟ ಹಾಗೆ, ಪ್ರತಿ ಸಂಯೋಜಿತ ಕಾಲೇಜಿನ, ಒಟ್ಟು ಅನುಮೋದಿತ ಕೋರ್ಸ್-ಕಾಂಬಿನೇಷನ್‌ಗಳಲ್ಲಿನ ಪ್ರತಿ ವಿಷಯದ ವಿದ್ಯಾರ್ಥಿ ಪ್ರಮಾಣ (Intake) ಪ್ರಸ್ತುತ ಅನುಮೋದಿತ ವಿದ್ಯಾರ್ಥಿ ಪ್ರಮಾಣದ 50% ಮೀರದಂತೆ ಕ್ರಮ ವಹಿಸುವುದು.
12. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು.

13. ಸ್ನಾತಕೋತ್ತರ ಪದವಿ ಕೋರ್ಸ್‌ಗಳಿಗೆ ವಿಶ್ವವಿದ್ಯಾಲಯ ಕಾಲಕಾಲಕ್ಕೆ ನಿಗಧಿಪಡಿಸುವ ಪ್ರವೇಶ ಮತ್ತು ಇತರೇ ಶುಲ್ಕಗಳನ್ನು ಮೀರದಂತೆ, ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದ ಶೇಕಡಾ 50ರಂತೆ (ಸರ್ಕಾರಿ ಕಾಲೇಜುಗಳಿಗೆ ಶೇಕಡಾ 100ರಂತೆ) ವಿಶ್ವವಿದ್ಯಾಲಯವು ಪ್ರಾಯೋಜಿಸುವ ವಿದ್ಯಾರ್ಥಿಗಳಿಂದ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು.

14. ವೈಶಾಕ V/S ರಾಜಸ್ಥಾನದ ರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ:13-8-1997ರ ಸರ್ವೋಚ್ಛ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ(ಬೋಧಕ/ಬೋಧಕೇತರ/ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾಧಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಛ ನ್ಯಾಯಾಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.

15. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಕಾಲೇಜು ಕೋರ್ಸ್‌ಗಳ ಶಿಕ್ಷಣ ಕ್ರಮವನ್ನು ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಬೋಧಕರುಗಳನ್ನು ಪ್ರಾಂಶುಪಾಲರು/ ಆಡಳಿತಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

16. ವಿದ್ಯಾರ್ಥಿಗಳು ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

17. ಕಾಲೇಜು ವಿದ್ಯಾರ್ಥಿಗಳ ಅಂಕಪಟ್ಟಿ, ಪದವಿ ಪ್ರಮಾಣ ಪತ್ರ ಹಾಗೂ ಇತರೇ ದಾಖಲೆಗಳನ್ನು ಮೂರು ತಿಂಗಳ ಅವಧಿಯೊಳಗೆ ವಿದ್ಯಾರ್ಥಿಗಳಿಗೆ ನೀಡಬೇಕು. ಅವಧಿ ಮೀರಿದ ನಂತರ ತಮ್ಮಲ್ಲಿಯೇ ಉಳಿದುಕೊಂಡಿರುವ ಅಂಕಪಟ್ಟಿಗಳು ಮತ್ತು ಪದವಿ ಪ್ರಮಾಣ ಪತ್ರಗಳ ಬಗ್ಗೆ ಕುಲಸಚಿವರು (ಮೌಲ್ಯಮಾಪನ) ಇವರಿಗೆ ವರದಿ ನೀಡತಕ್ಕದ್ದು.

18. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ ಪೂರ್ಣವಾಗದ ಅವಧಿಯ ಬೋಧನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

19. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

20. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.

21. 2023-24ನೇ ಸಾಲಿಗೆ ಕೋರ್ಸ್‌ಗಳ ಸಂಯೋಜನಾ ನವೀಕರಣಕ್ಕೆ ಕಾಲೇಜು ತಪ್ಪದೆ ಅರ್ಜಿಯನ್ನು ಸಲ್ಲಿಸತಕ್ಕದ್ದು.

22. *ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳು ನ್ಯಾಕ್(NAAC) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.*

23. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಅಧ್ಯಯನ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

ಆದೇಶದ ಮೇರೆಗೆ

ಕುಲಸಚಿವರು

ಗೆ,

ಪ್ರಾಂಶುಪಾಲರು,

MLA Academy of Higher Learning,
14th Cross, Malleswaram, Bengaluru- 560 003

ಪ್ರತಿಗಳು:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು- 01.
2) ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು- 01.
3) ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು- 01